# ಗಡಿಕನ್ನಡಿಗ

www.gadikannadiga.com

ಸಂಪಾದಕ:ಮುರುಗೇಶ ಬಿ.ಶಿವಪೂಜಿ

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ, ವಿಜಯಪುರ, ವಿಜಯನಗರ ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:22/ಸಂಚಿಕೆ:139 RNI NO.KAR KAN/2003/10452:No./PMG/KA/NK/BM/743/24-26 ಶನಿವಾರ ದಿನಾಂಕ: 27-04-2024 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com2


## ದಾಖಲೆಯ ಮತದಾನಕ್ಕೆ ಮೋದಿ ಕರೆ

ನವದೆಹಲಿ.ಏ.26– ಮತದಾನ ಹಬ್ಬದಲ್ಲಿ ದಾಖಲೆಯ ಸಂಖ್ಯೆಯಲ್ಲಿ ಭಾಗವಹಿಸಿ ಎಂದು ಪ್ರಧಾನ ನರೇಂದ್ರ ಮೋದಿ ಮನವಿ



ಮಾಡಿದ್ದಾರೆಲೋಕಸಭಾ ಚುನಾವಣೆಯಲ್ಲಿ ರಾಜ್ಯದ 14 ಕ್ಷೇತ್ರಗಳಿಗೆ ಮತದಾನ ನಡೆದಿದೆ. ಈ ಕುರಿತು ಪ್ರಧಾನ ನರೇಂದ್ರ ಮೋದಿ ಲೋಕಸಭೆಯ ಎರಡನೆ ಹಂತದ ಚುನಾವಣೆಯಲ್ಲಿ ದಾಖಲೆಯ ಸಂಖ್ಯೆಯಲ್ಲಿ ಮತದಾರರು ಮತ ಚಲಾಯಿಸುವಂತೆ ಮನವಿ ಮಾಡುತ್ತೇನೆ.ಹೆಚ್ಚಿನ ಪ್ರಮಾಣದ ಮತದಾನವು ನಮ್ಮ ಪ್ರಜಾಪ್ರಭುತ್ವವನ್ನು ಬಲಪಡಿಸುತ್ತದೆ. ನಮ್ಮ ಯುವ ಮತದಾರರು ಮತ್ತು ಮಹಿಳಾ ಮತದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ವಿಶೇಷವಾಗಿ ಕೋರುತ್ತೇನೆ.ನಮ್ಮ ಮತ ನಮ್ಮ ಧ್ವನಿ ಎಂದು ಕನ್ನಡದಲ್ಲೇ ಟ್ವೀಟ್ ಮಾಡಿದ್ದಾರೆ.ರಾಜ್ಯದ 14 ಲೋಕಸಭಾ ಕ್ಷೇತ್ರಗಳಲ್ಲಿ 247 ಅಭ್ಯರ್ಥಿಗಳ ಭವಿಷ್ಯ ನಿರ್ಧಾರವಾಗಲಿದೆ. ಬೆಳಗ್ಗೆ 7 ಗಂಟೆಯಿಂದ ಸಂಜೆ 6 ಗಂಟೆಯವರೆಗೆ 30,602 ಮತಗಟ್ಟೆಗಳಲ್ಲಿ ಮತದಾನ ನಡೆಯಲಿದೆ.

# ರಾಜ್ಯದಲ್ಲಿ ಶೇ.63.90ರಷ್ಟು ಮತದಾನ



ಬೆಂಗಳೂರು, ಏ.26– ದೇಶದ ಭವಿಷ್ಯದ ಮುನ್ನುಡಿ ಬರೆಯುವ ಲೋಕಸಭೆ ಚುನಾವಣೆಯ ರಾಜ್ಯದ ಮೊದಲ ಹಂತದ 14 ಕ್ಷೇತ್ರಗಳಿಗೆ ಇಂದು ನಡೆದ ಮತದಾನ ಬಹುತೇಕ ಶಾಂತಿಯುತವಾಗಿತ್ತು. ಮತದಾನ ಬೆಳಗ್ಗೆಯಿಂದಲೇ ಬಿರುಸಿನಂದ ಕೂಡಿದ್ದು ಸಂಜೆ 5 ಗಂಟೆ ವೇಳೆಗೆ ಶೇ.63.90%ರಷ್ಟು ಮತದಾನವಾಗಿದೆ

ದಕ್ಷಿಣ ಕನ್ನಡ ಲೋಕಸಭಾ ಕ್ಷೇತ್ರದಲ್ಲಿ ಹೆಚ್ಚು ಪ್ರಮಾಣದ ಮತದಾನವಾಗಿದ್ದರೆ, ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರದಲ್ಲಿ ಕಡಿಮೆ ಪ್ರಮಾಣದ ಮತದಾನವಾಗಿದೆ. ಎಂದಿನಂತೆ ರಾಜಧಾನಿ ಬೆಂಗಳೂರಿನ ಮತದಾರರಲ್ಲಿ ನಿರುತ್ಸಾಹ ಕಂಡುಬಂದಿದ್ದು, ಮತದಾನದ ಪ್ರಮಾಣ ನಿರೀಕ್ಷೆಯಂತೆ ಏರಿಕೆ ಆಗಿಲ್ಲ.ಗ್ರಾಮೀಣ ಹಾಗೂ ನಗರ ಪ್ರದೇಶದಲ್ಲೂ ಜನರು ಉತ್ಸಾಹದಿಂದ ಮತ ಚಲಾಯಿಸುತ್ತಿದ್ದುದು ಕಂಡುಬಂತು.

ಹಲವೆಡೆ ಮತದಾರರ ಪಟ್ಟಿಯಲ್ಲಿ ಹೆಸರು ನಾಪತ್ತೆ. ಆರಂಭದಲ್ಲಿ ಕೈಕೊಟ್ಟ ಮತಯಂತ್ರ. ರಾಜಕೀಯ ಪಕ್ಷಗಳ ಕಾರ್ಯಕರ್ತರ ನಡುವೆ ಮಾತಿನ ಚಕಮಕಿ, ಆರೋಪ–ಪ್ರತ್ಯಾರೋಪದಂತಹ ಸಣ್ಣ–ಪುಟ್ಟ ಘಟನೆಗಳನ್ನು ಹೊರತು ಪಡಿಸಿದರೆ ಯಾವುದೇ ರೀತಿಯ ಅಹಿತಕರ ಘಟನೆಗಳು ಈವರೆಗೆ ನಡೆದಿಲ್ಲ.

ಬೆಳಗ್ಗೆಯಿಂದಲೇ ಸರತಿ ಸಾಲಿನಲ್ಲಿ ನಿಂತು ಮತದಾರರು ಉತ್ಸಾಹದಿಂದಲೇ ಮತ ಚಲಾಯಿಸುತ್ತಿದ್ದುದು ಕಂಡುಬಂತು. ಮಧ್ಯಾಹ್ನ ಬಿರು ಬಿಸಿಲು ಹೆಚ್ಚಾಗುತ್ತದೆ ಎಂಬ ಹಿನ್ನೆಲೆಯಲ್ಲಿ ಮಹಿಳೆಯರು, ಹಿರಿಯ ನಾಗರಿಕರು ಬೆಳಗ್ಗೆಯೇ ಮತಗಟ್ಟೆಗೆ ಆಗಮಿಸಿ ಮತಚಲಾಯಿಸಿದರು.ಮತಗಟ್ಟೆಗಳಿಗೆ ಹೆಚ್ಚಾಗಿ ಮಹಿಳೆಯರು ಆಗಮಿಸಿ ಮತದಾನ ಮಾಡುತ್ತಿರುವ ದೃಶ್ಯಗಳು ಕಂಡುಬಂದವು.

ಯುವ ಮತದಾರರು, ನವಮತದಾರರಲ್ಲಿ ಉತ್ಸಾಹ ಹೆಚ್ಚಾಗಿರುವುದು ಹಲವೆಡೆ ಕಂಡುಬಂತು.ರಾಜಕಾರಣಿಗಳು, ಚಲನಚಿತ್ರ ನಟ, ನಟಿಯರು, ಖ್ಯಾತ ಕ್ರಿಕೆಟ್ ಪಟುಗಳು, ಕಿರುತೆರೆ ಕಲಾವಿದರು ಸೇರಿದಂತೆ ವಿವಿಧ ಗಣ್ಯರು ಮತಗಟ್ಟೆಗೆ ಆಗಮಿಸಿ ಸರತಿ ಸಾಲಿನಲ್ಲಿ ನಿಂತು ಮತಚಲಾಯಿಸಿ ಗಮನ ಸೆಳೆದರು.

ಮಧ್ಯಾಹ್ನ 1 ಗಂಟೆ ವೇಳೆಗೆ ರಾಜಧಾನಿ ಬೆಂಗಳೂರಿನ ಮೂರು ಕ್ಷೇತ್ರಗಳಾದ ಬೆಂಗಳೂರು ಉತ್ತರದಲ್ಲಿ ಶೇ. 32.25, ಬೆಂಗಳೂರು ದಕ್ಷಿಣದಲ್ಲಿ ಶೇ. 31.51, ಬೆಂಗಳೂರು ಕೇಂದ್ರದಲ್ಲಿ ಶೇ.30.10, ಹಾಗೂ ಉಡುಪಿ–ಚಿಕ್ಕಮಗಳೂರು ಶೇ.46.43, ಹಾಸನ ಶೇ. 40.99, ದಕ್ಷಿಣ ಕನ್ನಡ ಶೇ. 48.10, ಚಿತ್ರದುರ್ಗ ಶೇ. 39.05, ತುಮಕೂರು ಶೇ. 41.91, ಮಂಡ್ಯ ಶೇ.40.70, ಮೈಸೂರು ಶೇ. 41.58, ಚಾಮರಾಜನಗರ ಶೇ. 39.57, ಬೆಂಗಳೂರು ಗ್ರಾಮಾಂತರ ಶೇ. 36.09, ಚಿಕ್ಕಬಳ್ಳಾಪುರ ಶೇ.39.85, ಕೋಲಾರ ಶೇ. 38.42 ರಷ್ಟು ಮತದಾನವಾಗಿತ್ತು.ಹೈವೋಲ್ಟೇಜ್ ಕ್ಷೇತ್ರಗಳಾದ ಮಂಡ್ಯ, ಬೆಂಗಳೂರು ಗ್ರಾಮಾಂತರ, ಹಾಸನ ಸೇರಿದಂತೆ 14 ಕ್ಷೇತ್ರಗಳಿಗೂ ಸೂಕ್ತ ಭದ್ರತೆ ಒದಗಿಸಲಾಗಿದೆ. 70 ಕಂಪನಿ ಅರೆಸೇನಾ ಪಡೆ, ಡಿಎಆರ್ ಪ್ಲಟೂನ್, ಸಿಎಆರ್ ಮತ್ತು ಕೆಎಸ್‌ಆರ್‌ಪಿ ತುಕಡಿಗಳನ್ನು ನಿಯೋಜಿಸಲಾಗಿದೆ.ಸೂಕ್ಷ್ಮ ಮತಗಟ್ಟೆಗಳಿಗೆ ಹೆಚ್ಚಿನ ಭದ್ರತೆ ಒದಗಿಸಲಾಗಿದ್ದು, ಹೆಡ್‌ಕಾನ್‌ಸ್ಟೆಬಲ್ ಹಾಗೂ ಕಾನ್‌ಸ್ಟೆಬಲ್‌ಗಳನ್ನು ನಿಯೋಜಿಸಲಾಗಿದೆ.

ಕೋಲಾರ ತಾಲ್ಲೂಕಿನ ಕೆ.ಬಿ.ಹೊಸಳ್ಳಿ ಗ್ರಾಮದ ಜನರು ಮೂಲಭೂತ ಸೌಕರ್ಯ ಕೊರತೆ ಆರೋಪಿಸಿ ಮತದಾನ ಬಹಿಷ್ಕರಿಸುವ ಮೂಲಕ ಜನಪ್ರತಿನಿಧಿಗಳ ವಿರುದ್ಧ ಆಕ್ರೋಶ ವ್ಯಕ್ತ ಪಡಿಸಿದ ಘಟನೆ ಕೂಡ ನಡೆದಿದೆ.ಇಲ್ಲಿನ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಸ್ಥಾಪಿಸಿದ ಮತಗಟ್ಟೆಗೆ ಬೆಳಗ್ಗೆ 10 ಗಂಟೆಯಾದರೂ ಯಾವುದೇ ಮತದಾರರು ಬಂದಿರಲಿಲ್ಲ.

ಗ್ರಾಮದಲ್ಲಿ ಬಿಕೋ ಎನ್ನುವ ವಾತಾವರಣ ಕಂಡುಬಂದಿತ್ತು. ದಕ್ಷಿಣ ಕನ್ನಡದಲ್ಲಿ ಕಾಂಗ್ರೆಸ್ ಅಭ್ಯರ್ಥಿ ತಮ ಬೆಂಬಲಿಗರ ಜೊತೆ ಮತಗಟ್ಟೆಗೆ ಆಗಮಿಸಿದ್ದರು ಎಂದು ಆಕ್ಷೇಪ ವ್ಯಕ್ತ ಪಡಿಸಿ ಬಿಜೆಪಿ–ಜೆಡಿಎಸ್ ಕಾರ್ಯಕರ್ತರು ಕಾಂಗ್ರೆಸ್ ಕಾರ್ಯಕರ್ತರ ನಡುವೆ ಮಾತಿನ ಚಕಮಕಿ ನಡೆದರೆ,ಕನಕಪುರದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಮತಗಟ್ಟೆ ಬಳಿ ಗಿಫ್?ಟ ಕೂಪನ್ ಹಂಚುತ್ತಿದ್ದಾರೆಂದು ಆರೋಪಿಸಿ ಜೆಡಿಎಸ್–ಬಿಜೆಪಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.ಮೇ.7 ಕ್ಕೆ 14 ಕ್ಷೇತ್ರಗಳಿಗೆ 2ನೇ ಹಂತದ ಚುನಾವಣೆ ನಡೆಯಲಿದ್ದು, ಜೂ.4ರಂದು ಫಲಿತಾಂಶ ಪ್ರಕಟವಾಗಲಿದೆ.

## ಮೂಲಗಿಯಲ್ಲಿ ರಂಗೋಲಿ ಸ್ಪರ್ಧೆ ಏರ್ಪಡಿಸಿ ಮತದಾನ ಜಾಗೃತಿ

ಮೂಡಲಗಿ: ಪಟ್ಟಣದ ಪುರಸಭೆ ಆವರಣದಲ್ಲಿ ಅರಭಾವಿ ಮತ ಕ್ಷೇತ್ರದ ಸ್ವೀಪ್ ಸಮೀತಿಯಿಂದ ಲೋಕ ಲೋಕಸಭಾ ಚುನಾವಣೆಯಲ್ಲಿ ಮತದಾನದ ಅರಿವು ಮೂಡಿಸುವ ನಿಮಿತ್ಯ ಸ್ತ್ರೀ ಶಕ್ತಿ ಸಂಘಗಳ ಮಹಿಳೆಯರಿಗೆ ಶುಕ್ರವಾರದಂದು ರಂಗೋಲಿ ಸ್ಪರ್ಧೆ ಏರ್ಪಡಿಸುವ ಮೂಲಕ ಮತದಾನ ಜಾಗೃತಿ ಮೂಡಿಸಿಲ್ಲಾಯಿತಮತದಾನ ಅರಿವು ಮೂಡಿಸುವ ರಂಗೋಲಿ ಸ್ಪರ್ಧೆಯಲ್ಲಿ ಒಟ್ಟು 18 ಸ್ತ್ರೀ ಶಕ್ತಿ ಸಂಘದವರು ಭಾಗವಹಿಸಿ ಮತದಾನ ಅರಿವಿನ ವಿವಿಧ ಬಗ್ಗೆಯ ರಂಗೋಲಿಯಲ್ಲಿ ಚಿತ್ರ ಬಿಡಿಸಿ ಗಮನಸೇಳೆದರು. ಮೂಡಲಗಿ ತಾಪಂ ಇಒ ಹಾಗೂ ಅರಭಾವಿ ಮತ ಕ್ಷೇತ್ರದ ಸ್ವೀಪ್ ಸಮೀತಿ ಅಧ್ಯಕ್ಷ ನವೀನಪ್ರಸಾದ ಕಟ್ಟಿಮನಿ ವಿಜೇತರಿಗೆ ಪಾರಿತೋಷಕ ವಿತರಿಸಿ ಮಾತನಾಡಿದ ಅವರು ಮತದಾರರು ಪ್ರಾಮಾಣಿಕವಾಗಿ ತಮ್ಮ ಮತ ಹಕ್ಕನ್ನು ಚಲಾಯಿಸಿದರೆ ಮಾತ್ರ ಉತ್ತಮ ಅಭ್ಯರ್ಥಿ ಆಯ್ಕೆ ಮಾಡಲು ಸಾಧ್ಯ. ಗ್ರಾಮೀಣ ಪ್ರದೇಶದಲ್ಲಿ ಮಹಿಳಾ ಮತದಾರರು ತಪ್ಪದೆ ತಮ್ಮ ಮತ ಹಕ್ಕನ್ನು ಚಲಾಯಿಸಲು ಪ್ರೇರಿಪಿಸಬೇಕು.



ಮಹಿಳಾ ಮತದಾರರು ಮತದಾನದಿಂದ ದೂರ ಉಳಿಯುವುದು ಸರಿಯಲ್ಲ. ಚುನಾವಣೆಗಳಲ್ಲಿ ಉತ್ತಮ ಆಯ್ಕೆಗೆ ನಿರ್ಲಕ್ಷ ತೋರಬಾರದು. ಪ್ರತಿಯೊಬ್ಬ ಮತದಾರರು ಯಾವುದೇ ಆಸೆ, ಆಮಿಶಕ್ಕೆ ಒಳಗಾಗದೆ ಬೆಳಗಾವಿ ಜಿಲ್ಲೆಯಲ್ಲಿ ಮೇ.7ರಂದು ನಡೆಯಲಿರುವ ಲೋಕಸಭಾ ಚುನಾವಣೆಯಲ್ಲಿ ಮತಗಟ್ಟೆಗೆ ಬಂದು ಮತ ಚಲಾಯಿಸಬೇಕು ಎಂದರು.ಸ್ಪರ್ಧೆಯಲ್ಲಿ ವಡೇರಹಟ್ಟಿ ಸ್ತ್ರೀ ಶಕ್ತಿ ಸಂಘ ಪ್ರಥಮ, ಮೂಡಲಗಿ ಗ್ರಾಮ ಕಾಯಕ ಮಿತ್ರರ ತಂಡ ದ್ವಿತೀಯ, ಯಾದವಾಡ ಸ್ತ್ರೀ ಶಕ್ತಿ ಸಂಘ ತೃತೀಯ ಸ್ಥಾನ ಪಡೆದುಕೊಂಡರು ಹಾಗೂ ಸ್ಪರ್ಧೆಯಲ್ಲಿ ಭಾಗವಹಿಸಿದ ಎಲ್ಲ ಮಹಿಳೆಯರಿಗೆ ಪ್ರಮಾಣ ಪತ್ರ ವಿತರಿಸಿಲ್ಲಾಯಿತು ಹಾಗೂ ಮತದಾನದ ಪ್ರತಿಜ್ಞಾ ವಿಧಿ ಬೋಧಿಸಲಾಯಿತು. ಚಿತ್ರಕಲಾ ಶಿಕ್ಷಕರಾದ ಸುಭಾಸ ಕುರಣಿ, ಶೋಭಾ ಕಂಕಣವಾಡಿ, ಜಯಶ್ರೀ ನಿರ್ಣಾಯಕರಾಗಿ ಕಾರ್ಯ ನಿರ್ವಹಿಸಿದರು.

ಈ ಸಮಯದಲ್ಲಿ ತಾ.ಪಂ ಸಹಾಯಕ ನಿರ್ದೇಶಕರಾದ ಸಂಗಮೇಶ ರೊಡ್ಡನ್ನವರ, ಚಂದ್ರಶೇಖರ ಬಾರ್ಕಿ, ಪುರಸಭೆ ಆರೋಗ್ಯ ನಿರೀಕ್ಷಕರಾದ ಚಿದಾನಂದ ಮುಗಳಖೋಡ, ಪ್ರೀತಂ ಭೋವಿ ಹಾಗೂ ತಾ.ಪಂ ಸಿಬ್ಬಂದಿ ವರ್ಗದವರು ಇದ್ದರು.

## ಪ್ರಧಾನಿ ಮೋದಿ ಭೇಟಿ ಹಿನ್ನೆಲೆ ಸ್ಥಳ ಪರಿಶೀಲನೆ ಮೋದಿ ಕಾರ್ಯಕ್ರಮದಿಂದ ಬೂಸ್ಟರ್ ಡೋಸ್ ಸಿಗಲಿದೆ: ಜಗದೀಶ್ ಶೆಟ್ಟರ್

ಬೆಳಗಾವಿ: ಏ.28 ರಂದು ಬೆಳಗಾವಿಯ ಮಾಲಿನ ಸಿಟಿಯಲ್ಲಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ನಡೆಯುವ ಬೃಹತ್ ಸಮಾವೇಶದ ಸಿದ್ಧತೆಯನ್ನು ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಸೇರಿದಂತೆ ಅನೇಕ ಜನ ನಾಯಕರು ಪರಿಶೀಲನೆ ನಡೆಸಿದರು.



ಏ.28 ರಂದು ಚುನಾವಣೆ ಪ್ರಚಾರಕ್ಕೆ ಬೆಳಗಾವಿಗೆ ಆಗಮಿಸುತ್ತಿರುವ ಪ್ರಧಾನ ಮೋದಿ ಅವರ ಕಾರ್ಯಕ್ರಮ ಸಕಲ ಸಿದ್ಧತೆಯನ್ನು ಮಾಲಿನ ಸಿಟಿ ಮೈದಾನದಲ್ಲಿ ಸಂಸದೆ ಮಂಗಳ ಅಂಗಡಿ, ಶಾಸಕ ರಮೇಶ ಜಾರಕಿಹೊಳಿ, ಜೆಡಿಎಸ್ ಜಿಲ್ಲಾದ್ಯಕ್ಷ ಶಂಕರ ಮಾಡಲಗಿ, ಬೆಳಗಾವಿ ಬಿಜೆಪಿ ಮಹಾನಗರ ಅಧ್ಯಕ್ಷೆ ಗೀತಾ ಸುತಾರ ಮಾಜಿ ಶಾಸಕ ಅನಿಲ ಬೆನಕೆ, ಮಾಜಿ ವಿಧಾನ ಪರಿಷತ್ ಸದಸ್ಯ ಮಹಾಂತೇಶ ಕವಟಗಿಮಠ, ಮುಖಂಡರಾದ ಎಂಬಿ ಜಿರಳಿ, ರಮೇಶ ದೇಶಪಾಂಡೆ, ಮರಗೇಂದ್ರಗೌಡಾ ಪಾಟೀಲ್, ಎಫ್ ಎಸ್ ಸಿದ್ದನಗೌಡ, ಹನಂತ ಕೊಂಗಾಲಿ ಪರಿಶೀಲನೆ ನಡೆಸಿದರು.

ಬಳಿಕ ಸುದ್ದಿಗೋಷ್ಠಿ ನಡೆಸಿ ಮಾತನಾಡಿ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರು, ಏ.28 ರಂದು ಬೆಳಗಾವಿ ಮಾಲಿನ ಸಿಟಿ ಮೈದಾನದಲ್ಲಿ ಬೆಳಗ್ಗೆ 9 ಗಂಟೆ ಬೃಹತ್ ಸಮಾವೇಶ ಇರಲ್ಲಿದೆ. ಬೆಳಗಾವಿ, ಚಿಕ್ಕೋಡಿ ಎರಡು ಲೋಕಸಭಾ ಸೇರಿ 18 ವಿಧಾನಸಭಾದ ಶಾಸಕರು ಮಾಜಿ ಸಚಿವರು ಕಾರ್ಯಕರ್ತರು , ಬಿ.ಎಸ್ ಯಡಿಯೂರಪ್ಪ. ದೇವೇಗೌಡರು, ವಿಜಿಯೇಂದ್ರ, ಕುಮಾರಸ್ವಾಮಿಯವರು ಎಲ್ಲರೂ ಬರುತ್ತಾರೆ. ಇದೊಂದು ಐತಿಹಾಸಿಕ ಕಾರ್ಯಕ್ರಮವಾಗಲಿದೆ ಮೋದಿಯವರ ಸಮಾವೇಶ ಬಿಜೆಪಿಗೆ ಪ್ಲಸ್ ಪಾಯಿಂಟ್ ಆಗುತ್ತಿದೆ ಎಂದು ಹೇಳಿದ್ದರು.ಭಾರತದ ವೈವಿಧ್ಯಮಯ ದೇಶವಾಗಿದೆ ಅದರಲ್ಲೂ ಬೆಳಗಾವಿಯಲ್ಲಿ ಕನ್ನಡ ಮರಾಠಿ ಜನರು ಸಹೋದರಂತೆ ಇದ್ದಾರೆ, ಇದು ರಾಷ್ಟ್ರೀಯ ಚುನಾವಣೆ ಆಗಿರುವುದರಿಂದ ಎಲ್ಲರೂ ಬಿಜೆಪಿಯನ್ನು ಬೆಂಬಲಿಸುತ್ತಾರೆ, ಕಾಂಗ್ರೆಸ್ ನವರು ಇದನ್ನು ಸಾಮಾನ್ಯ ಪಂಚಾಯಿತಿ ಚುನಾವಣೆ ಅಂದುಕೊಂಡಿದ್ದಾರೆ ಎಂದರು. ದೇಶದ ಅಭಿವೃದ್ಧಿ, ದೇಶದ ಭದ್ರತೆಯನ್ನು ನೋಡಿಕೊಂಡರು ಮತ ನೀಡಬೇಕು. ಲೋಕಸಭಾ ಚುನಾವಣೆ ಎಂದರೆ ಇಡೀ ದೇಶದ ಭವಿಷ್ಯ ರೂಪಿಸುವ ಚುನಾವಣೆ ಆಗಿದೆ. ನರೇಂದ್ರ ಮೋದಿಯವರು ತಮ್ಮ ಆಡಳಿತ 10 ವರ್ಷದಲ್ಲಿ ಉತ್ತಮ ಸರ್ಕಾರ ನಡೆಸಿದ್ದಾರೆ. ಕಳೆದ 10 ವರ್ಷದಲ್ಲಿ ಅಭಿವೃದ್ಧಿಯಲ್ಲಿ 14 ನೇ ಸ್ಥಾನದಲ್ಲಿ ಇದ್ದ ಭಾರತ 5 ಸ್ಥಾನಕ್ಕೆ ಬಂದಿದೆ. ಎಂದರು.ನೇಹಾ ಹಿರೇಮಠ ವಿಚಾರದಲ್ಲಿ ಕಾಂಗ್ರೆಸ್ ಅಲ್ಪಸಂಖ್ಯಾತರ ತುಷ್ಟಿಕರಣ ನೀತಿ ಅನುಸರಿಸುತ್ತೀದೆ ನೇಹಾಳ ಕ್ಯಾರೆಕ್ಟರ್ ಬಗ್ಗೆ ಅಪಪ್ರಚಾರ ಮಾಡ್ತಿದ್ದಾರೆ. ತನಿಖೆ ನಡೆವಾಗಲೇ ಸಿಎಂ, ಗೃಹ ಸಚಿವರು ವೈಯಕ್ತಿಕ ಘಟನೆ ಅಂತ ಹೇಳಿಕೆ ಕೊಟ್ಟಿದ್ದರು, ಸಿಎಂ ನಿನ್ನೆ ಬಂದು ಸ್ವಾಂತನ ಹೇಳಿದ್ದರು ಒಂದು ವಾರ ಬೇಕಿತ್ತಾ ಎಂದು ಆಕ್ರೋಶ ವ್ಯಕ್ತಪಡಿಸಿದ್ದರು.

## ಏ.28 ರಂದು ಜಿಲ್ಲೆಗೆ ಪ್ರಧಾನಿ ಮೋದಿ ಭೇಟಿ: ಮಾನವ ರಹಿತ ವಾಯು ವಾಹನಗಳ ಹಾರಾಟ/ಬಳಕೆ ನಿಷೇಧ

ಬೆಳಗಾವಿ.ಏ.26–: ಬೆಳಗಾವಿ ನಗರದ ಮಾಲಿನಿ ಸಿಟಿಯಲ್ಲಿ ಏ.28 ರಂದು ಜರುಗಲ್ಲಿರುವ ಸಾರ್ವಜನಿಕ ಬಹಿರಂಗ ಸಭೆಯಲ್ಲಿ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಭಾಗವಹಿಸಲ್ಲಿದ್ದಾರೆ. ಸುರಕ್ಷತೆಯ ದೃಷ್ಟಿಯಿಂದ ಏ.27 ಬೆಳಗ್ಗೆ 6 ರಿಂದ ಏ.28ರ ಸಂಜೆ 6 ಗಂಟೆಯವರೆಗೆ ಬೆಳಗಾವಿ ತಾಲೂಕಿನ ವ್ಯಾಪ್ತಿಯಲ್ಲಿ ಮಾನವ ರಹಿತ ವಾಯು ವಾಹನಗಳ ಹಾರಾಟವನ್ನು ಅಥವಾ ಬಳಕೆಯನ್ನು ಕಡ್ಡಾಯವಾಗಿ ನಿಷೇಧಿಸಿ **Red Zone/ No Fly Zone** ಅಂತಾ ಘೋಷಿಸಿದೆ.ಈ ಹಿನ್ನೆಲೆಯಲ್ಲಿ ನಗರ ಪೊಲೀಸ್ ಆಯುಕ್ತರಿಂದ ಸೂಕ್ತ ಕ್ರಮವನ್ನು ಕೈಗೊಳ್ಳುವುದು ಎಂದು ಜಿಲ್ಲಾ ದಂಡಾಧಿಕಾರಿಗಳಾದ ನಿತೇಶ್ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಾಲ್ಯವಿವಾಹದಿಂದ ಅಪ್ರಾಪ್ತ ಬಾಲಕ, ಬಾಲಕಿಯರ ರಕ್ಷಣೆ

ಕೊಪ್ಪಳ, ಏಪ್ರಿಲ್ 26 : ಕುಷ್ಟಗಿ ತಾಲ್ಲೂಕಿನ ತಾವರಗೇರಾ ಪಟ್ಟಣದ ಬಸಣ್ಣಕ್ಯಾಂಪ್‌ನಲ್ಲಿ ಏಪ್ರಿಲ್ 26 ರಂದು ನಡೆಯಬೇಕಿದ್ದ ಅಪ್ರಾಪ್ತ ವಯಸ್ಸಿನ ಬಾಲಕ ಮತ್ತು ಬಾಲಕಿಯರ ವಿವಾಹವನ್ನು ವಿವಿಧ ಇಲಾಖೆಗಳ ಸಹಕಾರದಲ್ಲಿ ತಡೆಗಟ್ಟಿದ್ದು, ಮಕ್ಕಳನ್ನು ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರುಪಡಿಸಲಾಗಿದೆ. ಏಪ್ರಿಲ್ 26 ರಂದು ಕುಷ್ಟಗಿ ತಾಲ್ಲೂಕಿನ ತಾವರಗೇರಾ ಪಟ್ಟಣದ ಬಸಣ್ಣಕ್ಯಾಂಪ್‌ನಲ್ಲಿ ಅಪ್ರಾಪ್ತ ಬಾಲಕ ಹಾಗೂ ಬಾಲಕಿಯರ ವಿವಾಹ ಮಾಡುತ್ತಿರುವುದಾಗಿ ಏಪ್ರಿಲ್ 25 ರಂದು ಮಕ್ಕಳ ಸಹಾಯವಾಣಿ–1098/112ಗೆ ಮಾಹಿತಿ ಲಭ್ಯವಾಯಿತು. ಈ ಹಿನ್ನೆಲೆಯಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನೊಳಗೊಂಡ ತಂಡವು ತಾವರಗೇರಾ ಪಟ್ಟಣದ ಬಸಣ್ಣಕ್ಯಾಂಪ್‌ಗೆ ಭೇಟಿ ನೀಡಿ ಪರಿಶೀಲಿಸಲಾಗಿ, ವಿವಿಧ ಕುಟುಂಬಗಳಲ್ಲಿ ವಿವಾಹದ ಪೂರ್ವ ತಯಾರಿಗಳು ನಡೆಯುತ್ತಿದ್ದು, ಒಟ್ಟು 06 ಜೋಡಿಗಳ ವಿವಾಹವು ಬಾಲ್ಯವಿವಾಹಗಳೆಂದು ಕಂಡುಬಂದಿತು. ಶಾಲೆ ದಾಖಲಾತಿಗಳನ್ನು ಪಡೆದು ಪರಿಶೀಲಿಸಲಾಗಿ ಬಾಲ್ಯವಿವಾಹಕ್ಕೆ ಸಿಲುಕಬಹುದಾದ ಸಾಧ್ಯತೆಯಿದ್ದ ಇಬ್ಬರು ಬಾಲಕರು ಮತ್ತು ಆರು ಬಾಲಕಿಯರನ್ನು ಪತ್ತೆ ಮಾಡಿದ್ದು, ಬಾಲಕ ಮತ್ತು ಬಾಲಕಿಯರನ್ನು ಬಾಲ್ಯವಿವಾಹದಿಂದ ರಕ್ಷಿಸಿ ಮುಂದಿನ ಪೋಷಣೆ ಮತ್ತು ರಕ್ಷಣೆ ಹಿತದೃಷ್ಟಿಂದ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಮುಂದೆ ಹಾಜರು ಪಡಿಸಲಾಗಿದೆ. ಬಾಲ್ಯವಿವಾಹ ಮಾಡದಂತೆ ಪೋಷಕರಿಗೆ ತಿಳುವಳಿಕೆಯನ್ನು ನೀಡಿ, ಬಾಲ್ಯವಿವಾಹವನ್ನು ಮಾಡದಂತೆ ಪಾಲಕರಿಗೆ ಮತ್ತು ಪೋಷಕರಿಗೆ ನೋಟೀಸ್ ಅನ್ನು ಜಾರಿ ಮಾಡಲಾಗಿದೆ.



ಈ ರಕ್ಷಣಾ ಕಾರ್ಯದಲ್ಲಿ ಕುಷ್ಟಗಿ ಶಿಶು ಅಭಿವೃದ್ಧಿ ಯೋಜನೆಯ ಅಂಗನವಾಡಿ ಮೇಲ್ವಿಚಾರಕಿಯರಾದ ದುರಗಮ್ಮ, ತಾವರಗೇರಾ ಪೊಲೀಸ್ ಠಾಣೆಯ ವಿರೇಶ, ಮಹ್ಮದರಫಿ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ದೇವರಾಜ್ ತಿಲಗರರವರು ಭಾಗವಹಿಸಿದ್ದರು.

ಅಪ್ರಾಪ್ತ ವಯಸ್ಸಿನ ಬಾಲಕಿಯನ್ನು ವಿವಾಹವಾಗುವುದು, ಅಪ್ರಾಪ್ತ ವಯಸ್ಸಿನ ಮಕ್ಕಳಿಗೆ ವಿವಾಹ ಮಾಡುವುದು, ಅಂತಹ ವಿವಾಹಗಳಲ್ಲಿ ಭಾಗವಹಿಸುವುದು, ನೆರವು ನೀಡುವುದು, ಪ್ರೋತ್ಸಾಹಿಸುವುದು ಶಿಕ್ಷಾರ್ಹ ಅಪರಾಧವಾಗಿದ್ದು ಇಂತಹ ಪ್ರಯತ್ನಗಳನ್ನು ಯಾರೂ ಮಡಬಾರದು ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಬಕಾರಿ ಪೊಲೀಸ್ ಅಧಿಕಾರಿಗಳಿಂದ ವಿವಿಧೆಡೆ ದಾಳಿ; 5 ಪ್ರಕರಣ ದಾಖಲು

ಬಳ್ಳಾರಿ,ಏ.26:ಲೋಕಸಭೆ ಸಾರ್ವತ್ರಿಕ ಚುನಾವಣೆ ಅಂಗವಾಗಿ ಮಾದರಿ ನೀತಿ ಸಂಹಿತೆ ಹಿನ್ನೆಲೆಯಲ್ಲಿ ಬಳ್ಳಾರಿ ಜಿಲ್ಲೆ ವ್ಯಾಪ್ತಿಯಲ್ಲಿ ಗುರುವಾರದಂದು ಅಬಕಾರಿ ಪೊಲೀಸ್ ಅಧಿಕಾರಿ ಗಳಿಂದ ವಿವಿಧೆಡೆ ದಾಳಿ ನಡೆಸಿ ಅಕ್ರಮ ಮದ್ಯ ಸಾಗಾಣಿಕೆ ಸಂಬಂಧಿಸಿದಂತೆ 04 ಮತ್ತು ಅಕ್ರಮವಾಗಿ ಗಾಂಜಾ ಸಾಗಾಣಿಕೆ ಸಂಬಂದಿಸಿದಂತೆ 01 ಪ್ರಕರಣ ದಾಖಲಿಸಲಾಗಿದೆ ಎಂದು ಅಬಕಾರಿ ಉಪ ಆಯುಕ್ತ ಎನ್.ಮಂಜುನಾಥ ಅವರು ತಿಳಿಸಿದ್ದಾರೆ. ಬಳ್ಳಾರಿ ನಗರದ ಹಳೇ ಬೆಂಗಳೂರು ರಸ್ತೆಯಲ್ಲಿನ ಸ್ಟೇಟ್ ಲಿಕ್ಕರ್ಸ್ ಮುಂದೆ ಕ್ರಾಸ್‌ನಲ್ಲಿ ರಸ್ತೆಗಾವಲು ಸಂದರ್ಭದಲ್ಲಿ ನೋಂದಣಿ ಇಲ್ಲದ ಹಸಿರು ಬಣ್ಣದ ದ್ವಿಚಕ್ರ ವಾಹನದಲ್ಲಿ 12.960 ಲೀ. (ಅಂದಾಜು ಮೌಲ್ಯ ರೂ.26,769) ಮದ್ಯವನ್ನು ಸಾಗಾಣಿಕೆ ಮಾಡುತ್ತಿರುವ ವಾಹನ ಸವಾರ ಮತ್ತು ಮದ್ಯವನ್ನು ಜಪ್ತಿ ಮಾಡಿ ಪ್ರಕರಣ ದಾಖಲಿಸಲಾಗಿದೆ.



ಕಂಪ್ಲಿ ತಾಲೂಕಿನ ಮೆಟ್ರಿ ಗ್ರಾಮದ ವ್ಯಕ್ತಿಯೊಬ್ಬರ ಮನೆಯಲ್ಲಿ ಶೋಧನೆ ಮಾಡಿ ಅಕ್ರಮವಾಗಿ 9.720 ಲೀ. ಮದ್ಯ (ಅಂದಾಜು ಮೌಲ್ಯ ರೂ.7,567) ಹೊಂದಿರುವುದನ್ನು ವಶಕ್ಕೆ ಪಡೆದುಕೊಂಡು ಪ್ರಕರಣ ದಾಖಲಿಸಲಾಗಿದೆ. ಸಿರುಗುಪ್ಪ ತಾಲ್ಲೂಕಿನ ಮಾಟಸೂಗೂರು ಗ್ರಾಮದಿಂದ ಉತ್ತನೂರು ಗ್ರಾಮಕ್ಕೆ ಹೋಗುವ ಕ್ರಾಸ್ ಹತ್ತಿರ ರಸ್ತೆಗಾವಲು ಸಂದರ್ಭದಲ್ಲಿ ದ್ವಿಚಕ್ರ ವಾಹನದಲ್ಲಿ 8.640 ಲೀ (ಅಂದಾಜು ಮೌಲ್ಯ ರೂ.28841) ಮದ್ಯ ಹಾಗೂ ವಾಹನವನ್ನು ಜಪ್ತುಪಡಿಸಿ, ಪ್ರಕರಣ ದಾಖಲಿಸಲಾಗಿದೆ. ಬಳ್ಳಾರಿ ನಗರದ ಕೊಲ್ಮಿ ಚೌಕ್ ರಸ್ತೆಯಿಂದ ಬಾಪೂಜಿ ನಗರಕ್ಕೆ ಹೋಗುವ ರಸ್ತೆಯಲ್ಲಿ ರಸ್ತೆಗಾವಲು ವೇಳೆ ದ್ವಿಚಕ್ರ ವಾಹನದಲ್ಲಿ 21.600 ಲೀ. (ಅಂದಾಜು ಮೌಲ್ಯ ರೂ.54600) ಮದ್ಯ ಸಾಗಾಣಿಕೆ ಮಾಡುವ ವೇಳೆ ಮದ್ಯ ಮತ್ತು ವಾಹನ ಸವಾರನನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಲಾಗಿದೆ. ಬಳ್ಳಾರಿ ನಗರದ ಸ್ಟೇಡಿಯಂ ಹೋಗುವ ರಸ್ತೆಯಲ್ಲಿ ಅಕ್ರಮವಾಗಿ ಗಾಂಜಾ ಸಾಗಾಟ ಮಾಡುತ್ತಿದ್ದ ದ್ವಿಚಕ್ರ ವಾಹನದಲ್ಲಿ 1.510 ಗ್ರಾಂ ಎಲೆ, ಹೂವು, ಮೊಗ್ಗು, ಬೀಜ ಸೇರಿದ ಒಣ ಗಾಂಜಾ (ಅಂದಾಜು ಮೌಲ್ಯ ರೂ.1 ಲಕ್ಷ) ಸಾಗಾಣಿಕೆ ಮಾಡುತ್ತಿರುವುದನ್ನು ಪತ್ತೆಹಚ್ಚಿ, ವಾಹನ ಸವಾರನ್ನು ವಶಕ್ಕೆ ಪಡೆದುಕೊಂಡು ಗಾಂಜಾ ಹಾಗೂ ವಾಹನವನ್ನು ಜಪ್ತುಪಡಿಸಿ ಪ್ರಕರಣ ದಾಖಲಿಸಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.